ಕಬ್ಬಾ ನೀರನ್ನು ತೆಗೆದುಕೊಂಡು ಶುದ್ಧೀಕರಿಸಿ ಗ್ರಾಮಗಳಿಗೆ ಒದಗಿಸಲು ಉದ್ದೇಶಿಸಿದೆ. ಈ ಯೋಜನೆಯ ಅಂದಾಜು ಮೊತ್ತ ರೂ. 702.00 ಲಕ್ಷಗಳು ಹಾಗೂ ವಾರ್ಷಿಕ ನಿರ್ವಹಣಾ ವೆಚ್ಚ ರೂ. 30.78 ಲಕ್ಷಗಳು. ಇದು ದುಬಾರಿಯಾಗಿದ್ದು, ಮಿತವ್ಯಯ ದೃಷ್ಟಿಯಿಂದ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ನೇರವಾಗಿ ಶುದ್ಧೀಕರಿಸಿದ ನೀರನ್ನು ಪಡೆದು ಗ್ರಾಮಗಳಿಗೆ ಒದಗಿಸುವ ಬಗ್ಗೆ ತಾಂತ್ರಿಕ ಆರ್ಥಿಕ ಕಾರ್ಯಸಾಧ್ಯತೆಗಳನ್ನು ಪರಿಶೀಲಿಸಲಾಗುತ್ತಿದೆ.

ಇ) ಪ್ರಸ್ತಾವಿತ ಯೋಜನೆ ಕುರಿತು ಇನ್ನೂ ತೀರ್ಮಾನ ತೆಗೆದುಕೊಳ್ಳಬೇಕಾಗಿದೆ.

ಪ್ರೌಢಶಾಲಾ ಮುಖ್ಯೋಪಾಧ್ಯಾಯರ ನೇರ ನೇಮಕಾತಿ ಹಾಗೂ ಬಡ್ತಿ ವಿಚಾರ.

31(208) ಶ್ರೀ ಕುಂಬ್ಳೆ ಸುಂದರರಾವ್ (ಸುರತ್ಕಲ್) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿರುವ ಪ್ರೌಢಶಾಲಾ ಮುಖ್ಯೋಪಾಧ್ಯಾಯರುಗಳನ್ನು ಭರ್ತಿ ಮಾಡಿಕೊಳ್ಳಲು ಅನುಸರಿಸುತ್ತಿರುವ ಶೇಕಡವಾರು ಪ್ರಮಾಣ ಎಷ್ಟು.

ಆ) ಈ ಕುರಿತು 15-9-1998ರ ನ್ಯಾಯಾಲಯದ ಆದೇಶವನ್ನು ಸರ್ಕಾರವು ಕಾರ್ಯಗತಗೊಳಿಸಿದೆಯೇ ಇಲ್ಲದಿದ್ದರೆ ಅದಕ್ಕೆ ಕಾರಣಗಳೇನು?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :—

ಅ) ಶೇಕಡ 50 ಭಾಗ ನೇರನೇಮಕಾತಿ

ಶೇಕಡ 50 ಭಾಗ ಬಡ್ತಿಯಿಂದ

ಆ) ಕೆಎಟಿ ತೀರ್ಪಿಗೆ ಅನುಗುಣವಾಗಿ ದಿನಾಂಕ: 27-11-1998ರಂದು ನೇಮಕಾತಿ ನಿಯಮಗಳಿಗೆ ಸೂಕ್ತ ತಿದ್ದುಪಡಿ ತರಲು ಪರಿಶೀಲಿಸಲಾಗುತ್ತಿದೆ ಎಂದು ಆದೇಶ ಹೊರಡಿಸಿದೆ. ಅದರಂತೆ ಕ್ರಮಕ್ಕೆಗೊಳ್ಳಲಾಗುತ್ತಿದೆ.

ಸುರತ್ಕಲ್ ಕ್ಷೇತ್ರದಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಮಂಜೂರಾದ ಕೊಠಡಿಗಳು ಹಾಗೂ ಶೌಚಾಲಯಗಳ ಸಂಖ್ಯೆ.

ಶ್ರೀ ಕುಂಬ್ಳೆ ಸುಂದರರಾವ್ (ಸುರತ್ಕಲ್) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕಳೆದ 4 ವರ್ಷಗಳಲ್ಲಿ ಸುರತ್ಕಲ್ ಕ್ಷೇತ್ರದಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಮಂಜೂರಾದ ನೂತನ ಕೊಠಡಿಗಳ ಮತ್ತು ಶೌಚಾಲಯಗಳ ಸಂಖ್ಯೆ ಎಷ್ಟು? (ವರ್ಷವಾರು ಮಾಹಿತಿ ಒದಗಿಸುವುದು)

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :—

ಅ) ವರ್ಷ	ಸರ್ಕಾರಿ ಪ್ರಾಥಮಿಕ ಶಾಲೆಗಳು		ಸರ್ಕಾರಿ ಪ್ರೌಢಶಾಲೆಗಳು	
	ಮಂಜೂರಾದ ನೂತನ ಕೊಠಡಿಗಳ ಸಂಖ್ಯೆ	ಮಂಜೂರಾದ ಶೌಚಾಲಯಗಳ ಸಂಖ್ಯೆ	ಮಂಜೂರಾದ ನೂತನ ಕೊಠಡಿಗಳ ಸಂಖ್ಯೆ	ಮಂಜೂರಾದ ಶೌಚಾಲಯಗಳ ಸಂಖ್ಯೆ
1995-96	02	—	02	—
1996-97	11	—	05	01
1997-98	25	—	05	—
1998-99	04	—	—	—
	42	—	12	01

ಆ) ಸುರತ್ಕಲ್ ಕ್ಷೇತ್ರದಲ್ಲಿ 20 ಸರ್ಕಾರಿ ಪ್ರಾಥಮಿಕ ಶಾಲೆಗಳು ಹಾಗೂ 3 ಸರ್ಕಾರಿ ಪ್ರೌಢ ಶಾಲೆಗಳನ್ನು ಹೊರತುಪಡಿಸಿ ಉಳಿದೆಲ್ಲಾ ಶಾಲೆಗಳಿಗೆ ಶೌಚಾಲಯ ವ್ಯವಸ್ಥೆ ಕಲ್ಪಿಸಲಾಗಿದೆ.

ಇ) ಪ್ರತಿ ವರ್ಷವೂ ಹಂತ ಹಂತವಾಗಿ ಪ್ರತಿ ಶಾಲೆಗೂ ಶೌಚಾಲಯ ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಸರ್ಕಾರಿ ಪ್ರೌಢಶಾಲೆಯಲ್ಲಿರುವ ಖಾಲಿ ಅಧ್ಯಾಪಕರ ಹುದ್ದೆಗಳ ಬಗ್ಗೆ.

34(210) ಶ್ರೀ ಕುಂಭೆ ಸುಂದರರಾವ್ (ಸುರತ್ಕಲ್) :— ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ದಕ್ಷಿಣ ಕನ್ನಡ ಜಿಲ್ಲೆಯ ಸರ್ಕಾರಿ ಪ್ರೌಢಶಾಲೆಯಲ್ಲಿ ಖಾಲಿ ಇರುವ ಅಧ್ಯಾಪಕರುಗಳ ಹುದ್ದೆಗಳೆಷ್ಟು?

ಆ) ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?